**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ**

**ಸಂಚಾರಿ ನ್ಯಾಯಾಲಯ, ಅಜ್ಜಂಪುರ**

**ಸಿ.ಸಿ.ನಂಃ 1905/2023**

**ಫಿರ್ಯಾದುದಾರರುಃ** ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

-: **ವಿರುದ್ಧ** :-

**ಆರೋಪಿಃ**

1. ಶ್ರೀ ಮಹಂತೇಶ,
ಬಿನ್ ಶ್ರೀ ಸಣ್ಣರಂಗಪ್ಪ,
60 ವರ್ಷಗಳು,

2. ಶ್ರೀಮತಿ ಮೀನಾಕ್ಷಿ,
ಕೋಂ ಶ್ರೀ ಮಹಂತೇಶ,
55 ವರ್ಷಗಳು,

ಇಬ್ಬರ ವಾಸಃ ಕಲ್ಲಾಪುರ ಗ್ರಾಮ,
ಅಜ್ಜಂಪುರ ತಾಲ್ಲೂಕು.

**ದೋಷಾರೋಪಣೆ**

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್ಎಲ್.ಬಿ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 28.08.2023 ರಂದು ಬೆಳಿಗ್ಗೆ 8.00 ಗಂಟೆಗೆ ಅಜ್ಜಂಪುರ ಪೋಲೀಸ್ ಠಾಣಾ ಸರಹದ್ದಿನ ಕಲ್ಲಾಪುರ ಗ್ರಾಮದ ಹೆಬ್ಬಾಗಿಲಿನ ಬಳಿ ಚಾಸಾ-1/ ಶ್ರೀ ಗುರುಮೂರ್ತಿ ರವರು ತಮ್ಮ ಜಮೀನಿಗೆ ಹೋಗಿ ವಾಪಸ್ಸು ಮನೆಗೆ ಬರಲು ತನ್ನ ಬಾಬ್ತು ಮೋಟಾರು ಬೈಕ್‌ನಲ್ಲಿ ಬರುತ್ತಿರುವಾಗ, ನಿಮ್ಮಲ್ಲಿ 1 ನೇ ಆರೋಪಿಯ ಹಸುವಿನ ಕರು ಅಡ್ಡಬಂದಿದ್ದು, ಆಗ ಚಾಸಾ-1 ರವರು ತನ್ನ ಮೋಟಾರು ಬೈಕ್‌ನಿಲ್ಲಿಸಿದ್ದು, ಚಾಸಾ-1 ರವರ ಬೈಕ್ ಹಸುವಿನ ಕರುವಿಗೆ ಟಚ್ ಆಗದೆ ಇದ್ದರೂ ಸಹ, ಆರೋಪಿಗಳಾದ ನೀವು ಅಪರಾಧವನ್ನು ಮಾಡುವ ಸಮಾನ ಉದ್ದೇಶದಿಂದ ಚಾಸಾ-1 ರವರಿಗೆ ಸೂಳೆಮಗನೇ, ಬೋಳಿಮಗನೇ ಸರಿಯಾಗಿ ಬೈಕ್ ಓಡಿಸಲು ಬರುವುದಿಲ್ಲವೆ ಎಂದು ಅವರ ಶಾಂತಿಭಂಗ ಮಾಡುವ ಉದ್ದೇಶದಿಂದ ಅವಾಚ್ಯ ಶಬ್ದಗಳಿಂದ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ 1 ಮತ್ತು 2 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ಮತ್ತು 2 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ಚಾಸಾ–1 ರವರು ನಿಮ್ಮಲ್ಲಿ 1 ನೇ ಅರೋಪಿಗೆ ನಿಮ್ಮ ಕರುವಿಗೆ ತನ್ನ ಬೈಕ್ ಟಚ್ ಆಗಿರುವುದಿಲ್ಲ ಏಕೆ ಬೈಯುತ್ತೀರಿ ಎಂದು ಕೇಳಿದ್ದಕ್ಕೆ ನಿಮ್ಮಲ್ಲಿ 1 ನೇ ಆರೋಪಿ ಚಾಸಾ–1 ರವರಿಗೆ ದೊಣ್ಣೆಯನ್ನು ತೆಗೆದುಕೊಂಡು ಚಾಸಾ–1 ರವರ ಭುಜಕ್ಕೆ ಹೊಡೆದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯ 1 ಮತ್ತು 2 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ 1 ಮತ್ತು 2 ನೇ ಆರೋಪಿಗಳಾದ ನೀವು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರಃ1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಗಳ ಉತ್ತರಃ

ಆರೋಪಿ 1: Yes

ಆರೋಪಿ 2: Yes

ಪ್ರಃ2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಗಳ ಉತ್ತರಃ

ಆರೋಪಿ 1: Pleaded not guilty and claimed to be tried

ಆರೋಪಿ 2: Pleaded not guilty and claimed to be tried

(ಆರೋಪಿತರಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ : 26.12.2025

ಸಹಿ/-

(ರಾಹುಲ್ ಶೆಟ್ಟಿಗಾರ್)

ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ

ಪ್ರ.ದ.ನ್ಯಾದಂ., ತರೀಕೆರೆ.

ಆರೋಪಿತರ ಸಹಿಃ (ಸಂಚಾರಿ ನ್ಯಾಯಾಲಯ, ಅಜ್ಜಂಪುರ)